# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 1630

ಸದಸ್ಯರ ಹೆಸರು : ಶ್ರೀ ಗೋವಿಂದ ರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 11-03-2022

ಉತ್ತರಿಸುವ ಮಾನ್ಯ ಸಚಿವರು : ಕೃಷಿ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಿಸಾನ್ ಸಮ್ಮಾನ್ ಯೋಜನೆಯಡಿಯಲ್ಲಿ ಪ್ರತಿ ರೈತರ ಖಾತೆಗೆ ಎಷ್ಟು ರೂಪಾಯಿ ಸಂದಾಯವಾಗುತ್ತದೆ; | ಕೇಂದ್ರ ಸರ್ಕಾರದಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಅಡಿಯಲ್ಲಿ ರೈತರಿಗೆ ವರ್ಷಕ್ಕೆ ರೂ.6000/- ಗಳನ್ನು ರೂ.2000/- ದಂತೆ ಮೂರು ಕಂತುಗಳಲ್ಲಿ ಹಾಗೂ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ರೂ.4000/-ಗಳನ್ನು ರೂ.2000/- ದಂತೆ ಎರಡು ಕಂತುಗಳಲ್ಲಿ ಸಂದಾಯ ಮಾಡಲಾಗುತ್ತದೆ. |
| ಆ) | ಈ ಯೋಜನೆಗೆ ನಿಗದಿಪಡಿಸಿರುವ ಮಾನದಂಡಗಳೇನು; | ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರಿಗೆ ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗು ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯ ಗಳಿಸಲು ನೆರವಾಗುವ ಉದ್ದೇಶದಿಂದ ಸಾಗುವಳಿ ಭೂಮಿ ಹೊಂದಿರುವ (01.02.2019 ರಳೊಳಗಾಗಿ ಸ್ವಾಧೀನದಲ್ಲಿರುವ /ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ವಾರ್ಷಿಕ ರೂ.6000/-ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ನೆರವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನೀಡಲಾಗುತ್ತಿದೆ.<br><br>ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ:14.08.2019 ರಿಂದ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.**4000**/-ಗಳ ಆರ್ಥಿಕ ನೆರವನ್ನು ಎರಡು ಕಂತುಗಳಲ್ಲಿ **ಪಿ.ಎಂ.ಕಿಸಾನ್-ಕರ್ನಾಟಕ** ಯೋಜನೆಯಡಿ ಘೋಷಿಸಲಾಗಿದೆ. |

<table>
<tr>
<td>ಇ)</td>
<td>ಕೋಲಾರ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ಫಲಾನುಭವಿಗಳಿದ್ದಾರೆ; (ತಾಲ್ಲೂಕುವಾರು ವಿವರ ಒದಗಿಸುವುದು)</td>
<td>ಕೋಲಾರ ಜಿಲ್ಲೆಯಲ್ಲಿ ಸದರಿ ಯೋಜನೆಯಡಿ ಒಟ್ಟು 1,14,626 ರೈತರು ಪ್ರಯೋಜನ ಪಡೆದಿರುತ್ತಾರೆ.
<table>
<tr><th>ಕ್ರ. ಸಂ.</th><th>ತಾಲ್ಲೂಕು</th><th>ಫಲಾನುಭವಿಗಳ ಸಂಖ್ಯೆ</th></tr>
<tr><td>1</td><td>ಬಂಗಾರಪೇಟೆ</td><td>26,056</td></tr>
<tr><td>2</td><td>ಕೋಲಾರ</td><td>27,530</td></tr>
<tr><td>3</td><td>ಮಾಲೂರು</td><td>18,417</td></tr>
<tr><td>4</td><td>ಮುಳಬಾಗಿಲು</td><td>22,750</td></tr>
<tr><td>5</td><td>ಶ್ರೀನಿವಾಸಪುರ</td><td>19,873</td></tr>
<tr><td colspan="2">ಒಟ್ಟು</td><td>1,14,626</td></tr>
</table>
</td>
</tr>
<tr>
<td>ಈ)</td>
<td>ರೈತರಿಗೆ ವಿತರಿಸುವ ಬಿತ್ತನೆ ಬೀಜ ಹಾಗೂ ಕೀಟನಾಶಕಗಳ ಗುಣಮಟ್ಟ ಕಾಪಾಡದೆ ರೈತರು ನಷ್ಟ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td>
<td>ರಾಜ್ಯದಲ್ಲಿ ಬಿತ್ತನೆ ಬೀಜ ಹಾಗೂ ಕೀಟನಾಶಕಗಳ ಗುಣಮಟ್ಟದಲ್ಲಿ ಕಡಿಮೆ ಇರುವುದು ತಪಾಸಣೆಗಳಲ್ಲಿ ಕಂಡು ಬಂದಿದ್ದು, ಅವುಗಳ ಪೂರೈಕೆದಾರರ ವಿರುದ್ಧ ದಂಡನೀಯ ಕ್ರಮಗಳನ್ನು ಕೈಗೊಳ್ಳಲಾಗಿದೆ.</td>
</tr>
<tr>
<td>ಉ)</td>
<td>ರೈತರಿಗೆ ಸಂಬಂಧಿಸಿದ ಸರ್ಕಾರದ ಯೋಜನೆಗಳ ಮಾಹಿತಿ ರೈತರಿಗೆ ಇಲ್ಲದೆ, ಯೋಜನೆಗಳು ಪರಿಣಾಮಕಾರಿಯಾಗಿ ಜಾರಿಯಾಗುತ್ತಿಲ್ಲವೆಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?</td>
<td>ಇಲ್ಲ.</td>
</tr>
</table>

**ಸಂಖ್ಯೆ: ಕೃಇ 25 ಕೃಕೈಲ 2022**

**(ಬಿ.ಸಿ.ಪಾಟೀಲ್)**
**ಕೃಷಿ ಸಚಿವರು**